# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 42(79)
ಸದಸ್ಯರ ಹೆಸರು : ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ
(ನಾಮ ನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ : 12-09-2022
ಉತ್ತರಿಸುವ ಸಚಿವರು : ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಾಜಿ ಮುಖ್ಯಮಂತ್ರಿಗಳಾದ ದಿ: ಎಸ್. ನಿಜಲಿಂಗಪ್ಪರವರು ವಾಸವಿದ್ದಂತಹ ಚಿತ್ರದುರ್ಗದಲ್ಲಿರುವ ಮನೆಯನ್ನು ಸಂರಕ್ಷಿಸಿ, ಅಭಿವೃದ್ಧಿಪಡಿಸುವ ಬಗ್ಗೆ ಹಿಂದಿನ ಮುಖ್ಯಮಂತ್ರಿಗಳಾಗಿದ್ದ ಶ್ರೀ ಯಡಿಯೂರಪ್ಪರವರು ಆಯವ್ಯಯದಲ್ಲಿ ಘೋಷಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಹೌದು |
| ಆ) | ಈ ಸಂಬಂಧ ದಿನಾಂಕ: 04.10.2021ರಂದು ಸರ್ಕಾರದ ಆದೇಶವಾಗಿದ್ದರೂ ಇದುವರೆವಿಗೂ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣಗಳೇನು; (ಪೂರ್ಣ ವಿವರಗಳೊಂದಿಗೆ ಮಾಹಿತಿ ನೀಡುವುದು) | • 2021-22ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 243 ರಲ್ಲಿ ಕರ್ನಾಟಕದ ಮಾಜಿ ಮುಖ್ಯಮಂತ್ರಿ ದಿವಂಗತ ಎಸ್. ನಿಜಲಿಂಗಪ್ಪನವರು ಚಿತ್ರದುರ್ಗದಲ್ಲಿ ವಾಸವಿದ್ದ ಮನೆಯನ್ನು ಸಂರಕ್ಷಿಸಲು ಹಾಗೂ ಅಭಿವೃದ್ಧಿಗೊಳಿಸಲು ರೂ.5.00 ಕೋಟಿ ಅನುದಾನವನ್ನು ಘೋಷಿಲಾಗಿದ್ದು, ಅದರಂತೆ ರೂ.5.00 ಕೋಟಿಗಳನ್ನು ಜಿಲ್ಲಾಧಿಕಾರಿ, ಚಿತ್ರದುರ್ಗ ಜಿಲ್ಲೆ, ಇವರಿಗೆ ಬಿಡುಗಡೆ ಮಾಡಲಾಗಿರುತ್ತದೆ.<br>• ಮಾಜಿ ಮುಖ್ಯಮಂತ್ರಿ ದಿವಂಗತ ಶ್ರೀ ಎಸ್. ನಿಜಲಿಂಗಪ್ಪನವರ ವಿಲ್‌ನ ಪ್ರಕಾರ ದಿ: ಎಸ್. ನಿಜಲಿಂಗಪ್ಪನವರ ಪುತ್ರನಾದ ಶ್ರೀ ಎಸ್.ಎಸ್. ಕಿರಣ್‌ಶಂಕರ್ ಇವರು ಸದರಿ ಸ್ವತ್ತಿನಲ್ಲಿ ವಾಸ ಮಾಡಲು ಮಾತ್ರ ಅಧಿಕಾರ ಹೊಂದಿದ್ದು, ಶ್ರೀ ಎಸ್.ಎಸ್. ಕಿರಣ್‌ಶಂಕರ್ ಇವರ ಪುತ್ರ ಶ್ರೀ ಎಸ್.ಕೆ. ವಿನಯ್ (ದಿ: ಎಸ್. ನಿಜಲಿಂಗಪ್ಪನವರ ಮೊಮ್ಮಗ) ಇವರಿಗೆ ಸದರಿ ಆಸ್ತಿಯ ಮೇಲೆ ಸಂಪೂರ್ಣವಾದ ಹಕ್ಕು ಇರುತ್ತದೆ.<br>• ಶ್ರೀ.ಎಸ್.ಕೆ.ವಿನಯ್‌ರವರು ವಿದೇಶದಲ್ಲಿದ್ದು, ಅವರು ಜೂನ್-2022ಕ್ಕೆ ಬರುವುದಾಗಿ ತಿಳಿಸಿದ್ದರಿಂದ ಮನೆಯ ಹಸ್ತಾಂತರ ನೋಂದಣಿ ಪ್ರಕ್ರಿಯೆಯನ್ನು ದಿ:29.06.2022ರಂದು ಜಿಲ್ಲಾಧಿಕಾರಿ, ಚಿತ್ರದುರ್ಗ ಇವರು ನಿಗದಿಪಡಿಸಿದ್ದರು.<br>• ನೋಂದಣಿ ಸಮಯದಲ್ಲಿ ನೋಂದಾಣಾಧಿಕಾರಿ, ಚಿತ್ರದುರ್ಗ ಇವರು ಮನೆಯ ವಾರಸುದಾರಿಕೆಯಲ್ಲಿ ಸ್ಪಷ್ಟತೆಯಿಲ್ಲದೇ ಇರುವುದರಿಂದ ಈ ಬಗ್ಗೆ ಕಾನೂನು ಅಭಿಪ್ರಾಯ ಪಡೆಯಲು ಕೋರಿ ನೋಂದಣಿ ಪ್ರಕ್ರಿಯೆ ಮುಂದೂಡಿರುತ್ತಾರೆ. |

| | | |
|---|---|---|
| | | • ದಿ:23.08.2022ರಂದು ಸರ್ಕಾರದಿಂದ ಕಾನೂನು ಅಭಿಪ್ರಾಯ ನೀಡಿ, ಅಗತ್ಯ ಕ್ರಮವಹಿಸಲು ಜಿಲ್ಲಾಧಿಕಾರಿ, ಚಿತ್ರದುರ್ಗ ಇವರಿಗೆ ಪತ್ರ ಬರೆಯಲಾಗಿದೆ. (ಪ್ರತಿ ಲಗತ್ತಿಸಿದೆ). |
| ಇ) | ಈ ಸಂಬಂಧ ಚಿತ್ರದುರ್ಗ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ನಿರ್ಲಕ್ಷ್ಯ ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | • ಜಿಲ್ಲಾಡಳಿತ, ಚಿತ್ರದುರ್ಗ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸದರಿ ಖರೀದಿ ಪ್ರಕ್ರಿಯೆಯನ್ನು ಕಾನೂನು ರೀತಿಯಲ್ಲಿ ಪೂರ್ಣಗೊಳಿಸಲು ಅಗತ್ಯ ಕ್ರಮವಹಿಸಲಾಗುತ್ತಿದೆ. |
| ಈ) | ಯಾವ ಕಾಲಮಿತಿಯಲ್ಲಿ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು? | • ಅದಷ್ಟು ಬೇಗ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಜಿಲ್ಲಾಧಿಕಾರಿ, ಚಿತ್ರದುರ್ಗ ಇವರಿಗೆ ತಿಳಿಸಲಾಗಿದೆ. |

ಸಂಖ್ಯೆ: ಕಸಂವಾ 377 ಕಸಧ 2022

**(ವಿ. ಸುನಿಲ್ ಕುಮಾರ್)**
ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು